# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ/ಸಂ.ವಿ:/2023-24/ 645 ದಿನಾಂಕ: 30.09.2023

## ಸುತ್ತೋಲೆ

ವಿಷಯ: ಕರ್ನಾಟಕ ವಿಧಾನಮಂಡಲ ಗ್ರಂಥಾಲಯದ ಉಪಯೋಗವನ್ನು ಪಡೆದುಕೊಳ್ಳುವ ಬಗ್ಗೆ.

ಉಲ್ಲೇಖ: 1. ಎಂ.ಕೆ. ವಿಶಾಲಾಕ್ಷಿ, ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ, ಬೆಂಗಳೂರು ಇವರ ಪತ್ರ ದಿನಾಂಕ: 12.09.2023.

2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 30.09.2023 (ಕಂಡಿಕೆ- 128).

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (01) ರನ್ವಯ ಕರ್ನಾಟಕ ವಿಧಾನಮಂಡಲ ಗ್ರಂಥಾಲಯವು 1930 ರಲ್ಲಿ ಆರಂಭವಾಗಿ ಇಂದು ಅಪಾರವಾದ ಅತ್ಯಮೂಲ್ಯ ಗ್ರಂಥಗಳನ್ನು ಅಂದರೆ, ಭಾರತ ಸಂವಿಧಾನ ರಚನಾ ಸಭೆಯ ನಡಾವಳಿಗಳು, ಕರ್ನಾಟಕ ವಿಧಾನ ಮಂಡಲದ ನಡಾವಳಿಗಳು, ಲೋಕಸಭೆ ಮತ್ತು ರಾಜ್ಯಸಭೆಯ ನಡಾವಳಿಗಳು, House of Lords/House of Commons ಸಂಪುಟಗಳು, ಜನಗಣತಿಯ ವರದಿಗಳು, ರಾಜ್ಯ ಮತ್ತು ಕೇಂದ್ರ ಸರ್ಕಾರದ ಗೆಜೆಟ್‌ಗಳು, ಸಮಿತಿಗಳ ಹಾಗೂ ಆಯೋಗಗಳ ವರದಿಗಳು, ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ಬರವಣಿಗೆಗಳು, ಭಾರತದ ಮಹಾಪುರುಷರ ಆತ್ಮಚರಿತ್ರೆಗಳು ಇನ್ನೂ ಹಲವಾರು ಸಂಗ್ರಹಗಳನ್ನು ಒಳಗೊಂಡಿರುತ್ತದೆ.

ಸದರಿ ಅತ್ಯಮೂಲ್ಯ ಗ್ರಂಥಗಳು **ವಿಧಾನಮಂಡಲ ಗ್ರಂಥಾಲಯ, ಕೊಠಡಿ ಸಂಖ್ಯೆ:28, ನೆಲಮಹಡಿ, ವಿಧಾನಸೌಧ, ಬೆಂಗಳೂರು** ಇಲ್ಲಿ ಪರಾಮರ್ಶೆಗಾಗಿ ಲಭ್ಯವಿರುತ್ತದೆ. ಇದಲ್ಲದೇ ವಿಧಾನಮಂಡಲದ ಉಭಯ ಸದನಗಳ ನಡಾವಳಿ ಪುಸ್ತಕಗಳನ್ನು ಡಿಜಿಟಲೈಜೇಷನ್ ಮಾಡಲಾಗಿದ್ದು, ಅದನ್ನು ವಿಧಾನಮಂಡಲದ ವೆಬ್‌ಸೈಟ್ **www.kla.kar.nic.in** ನಲ್ಲಿ ಪಡೆಯಬಹುದಾಗಿರುತ್ತದೆ.

ಮೇಲ್ಕಂಡ ಸಂಗ್ರಹಗಳನ್ನು ಹೊಂದಿರುವ ವಿಧಾನಮಂಡಲ ಗ್ರಂಥಾಲಯವನ್ನು ಹೆಚ್ಚಿನ ರೀತಿಯಲ್ಲಿ ಸದುಪಯೋಗಪಡಿಸಿಕೊಳ್ಳುವ ಸಂಬಂಧ ಉಲ್ಲೇಖ (02)ರ ಮಾನ್ಯ ಕುಲಪತಿಯವರ ಅನುಮೋದನೆ ಮೇರೆಗೆ ತುಮಕೂರು ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು ಹಾಗೂ ಸಂಶೋಧನಾರ್ಥಿಗಳು ಸದರಿ ಸಂಗ್ರಹಗಳ ಉಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

D-Samuel 30/09/2023

ನಿರ್ದೇಶಕರು-ಸಂಶೋಧನೆ (ಪ್ರ)

ನಿರ್ದೇಶಕರು - ಸಂಶೋಧನೆ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಇವರಿಗೆ,

1. ಎಲ್ಲಾ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರು/ಸಂಯೋಜಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಎಲ್ಲಾ ವಿಭಾಗಗಳ ಸಂಶೋಧನಾರ್ಥಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸತಕ್ಕದ್ದು)
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ.